# ವಾರ್ಡ್ ಸಭೆ ಸಂಖ್ಯೆ.25

ದಿನಾಂಕ:.01.01.2022 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ವಾರ್ಡ್ ಅಭಿಯಂತರರು (ಕಾರ್ಯದರ್ಶಿಗಳು) ಅಧ್ಯಕ್ಷತೆಯಲ್ಲಿ ಕರೆಯಲಾಯಿತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಕಾರ್ಯದರ್ಶಿ)
2. ಶ್ರೀ ಜಯಪಾಲ್ ಸದಸ್ಯರು.
3. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
4. ಶ್ರೀಮತಿ ಪ್ರೇಮ ಸದಸ್ಯರು.
5. ಶ್ರೀಮತಿ ಮಹಾಲಕ್ಷ್ಮೀ ಸದಸ್ಯರು.
6. ಕುಮಾರಿ ಕಮಲ ಸದಸ್ಯರು.
7. ಶ್ರೀ ನಂಜೇಗೌಡ ಬಿ.ವಿ ಸದಸ್ಯರು.
8. ಶ್ರೀ ರಾಜೇಶ್ ಸದಸ್ಯರು.
9. ಶ್ರೀ ಬಿ.ಆರ್ ಪುಟ್ಟಸ್ವಾಮಿ ಸದಸ್ಯರು.
10. ಶ್ರೀಮತಿ ಮಮತ ಕಿರಣ್ ಆರೋಗ್ಯ ವೈದ್ಯಾಧಿಕಾರಿಗಳು, ಶಂಕರನಗರ ಪ್ರಾಥಮಿಕ ಆರೋಗ್ಯ ಕೇಂದ್ರ.
11. ಶ್ರೀ ಪ್ರದೀಪ್ ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ಜಿ.ಕೆ ವೆಂಕಟೇಶಯ್ಯ ಕೆಲಸ ಪರಿವೀಕ್ಷಕರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
14. ಶ್ರೀ ಲೋಕೇಶ್ ಪಶು ಸಂಗೋಪನ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
15. ಶ್ರೀ ನಿಂಗರಾಜ ಎನ್ ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
16. ಆರ್.ಎಂ.ಸಿ ಯಾರ್ಡ್ ಪೋಲೀಸ್ ಠಾಣೆಯ ಅಧಿಕಾರಿ.
17. ನಂದಿನಿ ಲೇಔಟ್ ಪೋಲೀಸ್ ಠಾಣೆಯ ಅಧಿಕಾರಿ.
18. ಮಹಾಲಕ್ಷ್ಮೀ ಲೇಔಟ್ ಠಾಣೆಯ ಅಧಿಕಾರಿ.
19. ಶ್ರೀ ದಿಲೀಪ್ ಕುಮಾರ್ ಕೆ ಮಾರ್ಷಲ್ ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ.ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | – |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | – |
| 3. | ಸದಸ್ಯರು ವ್ಯಾಕ್ಸಿನ್ ಬಗ್ಗೆ ಮಾಹಿತಿ ಕೋರಿದರು, ಇದಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಶಂಕರನಗರದ ಶ್ರೀಮತಿ ಡಾ॥ ಮಮತ ಕಿರಣ್ ರವರು ಮಾಹಿತಿ ನೀಡಿದರು ಹಾಗೂ ಸದರಿ ರವರು ವರ್ಗಾವಣೆ ಆಗುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು. ಸಭೆಯಲ್ಲಿ ಹಾಜರಿದ್ದ ಸದಸ್ಯರು ಶ್ರೀಮತಿ ಡಾ॥ ಮಮತ ಕಿರಣ್ ರವರೆ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಮುಂದುವರೆಯಬೇಕು ಎಂದು ಸರ್ವ ಸಮ್ಮತದಿಂದ ಅಭಿಪ್ರಾಯ ತಿಳಿಸಿದರು. | – |
| 4. | ಶ್ರೀಮತಿ ಡಾ॥ ಮಮತ ಕಿರಣ್ ರವರು ಫ್ರಂಟ್‌ಲೈನ್ ವರ್ಕರ್ಸ್ ಮತ್ತು 60 ವರ್ಷ ಮೇಲ್ಪಟ್ಟವರಿಗೆ ಭೂಸ್ಟರ್ ಡೋಸ್ ನೀಡಲಾಗುವುದು ಆದರೆ ಲಸಿಕೆ ಪಡೆದು 39 ವಾರಗಳು ಮುಕ್ತಾಯವಾಗಿರಬೇಕು ಎಂದು ತಿಳಿಸಿದರು. | – |
| 5. | ಶ್ರೀಮತಿ ಡಾ॥ ಮಮತ ಕಿರಣ್ ರವರು 15-17 ವರ್ಷದ ಶಾಲಾ ಮಕ್ಕಳಿಗೆ ಕೋವ್ಯಾಕ್ಸಿನ್ ಲಸಿಕೆ ನೀಡಲಾಗುವುದು ಎಂದು ತಿಳಿಸಿದರು. | – |
| 6. | ಶಿವರುದ್ರಪ್ಪ ಮನೆಯ ರಸ್ತೆಯಲ್ಲಿ ಸ್ವತ್ತಿನ ಸಂಖ್ಯೆ.705, 707 ಮತ್ತು 904 ರ ನಿವಾಸಿಗಳು ನಮ್ಮ ರಸ್ತೆಯಲ್ಲಿ ಒಳಚರಂಡಿ ದುರಸ್ತಿ ಮಾಡಿಕೊಡುವಂತೆ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರೊಂದಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿದರು. ಇದಕ್ಕೆ ಸಹಾಯಕ ಅಭಿಯಂತರರು ಅಂದಾಜು ಪಟ್ಟಿಯನ್ನು ತಯಾರಿಸಿ ಸಲ್ಲಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |

Scanned with CamScanner

| | | |
|---|---|---|
| 7. | ಕಾಯದರ್ಶಿಗಳು ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು 12 ಬ್ಲಾಕ್ ಸ್ಪಾಟ್‌ಗಳು ಇದ್ದು ಸದರಿ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸುವುದರ ಯೋಜನೆಯನ್ನು ನೀಡುವಂತೆ ಹಿಂದಿನ ಸಭೆಯಲ್ಲಿ ಕೋರಿದಾಗ ಕಿರಯ ಆರೋಗ್ಯ ಪರಿವೀಕ್ಷಕರು ಸೋಮವಾರ ನೀಡುತ್ತೇನೆ ಎಂದು ತಿಳಿಸಿರುತ್ತೀರಿ ಆದ್ದರಿಂದ ಪ್ರಸ್ತಾಪಿತ ಯೋಜನೆಯನ್ನು ನೀಡುವಂತೆ ಕೋರಿದರು. ಆದರೆ ಘನತ್ಯಾಜ್ಯ ವಿಭಾಗಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ಹಾಜರಿರಲಿಲ್ಲ. | ಕಿರಿಯ ಆರೋಗ್ಯ ಪರಿವೀಕ್ಷಕರು |
| 8. | ಶಂಕರನಗರದ ದೇವಸ್ಥಾನ ಪಾರ್ಕ್‌ನಲ್ಲಿ ಕಸ ತೆಗೆಯಲು ಹಾಗೂ ಸೊಳ್ಳೆಗಳಿಗೆ ಫಾಗ್ ಸಿಂಪಡಿಸುವಂತೆ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಕಿರಿಯ ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕರು |
| 9. | ಶ್ರೀ ಪುಟ್ಟಸ್ವಾಮಿ ಸದಸ್ಯರು 5ನೇ ಮುಖ್ಯರಸ್ತೆ ವಿಜಯಾನಂದನಗರದಲ್ಲಿ ಒಳಚರಂಡಿ ದುರಸ್ತಿ ಮಾಡಿಕೊಡಬೇಕೆಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟವರಿಗೆ ತಿಳಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 10. | ಶ್ರೀ ನಂಜೇಗೌಡ ಸದಸ್ಯರು ರವರು ಎಂ.ಇ.ಐ ರಸ್ತೆಯ ರಂಗನಾಥ ಬಾರ್ ಬಳಿ ರಸ್ತೆ ಬದಿ ವ್ಯಾಪಾರಿಗಳು ರಸ್ತೆಯ ಎರಡು ಬದಿಯಲ್ಲಿ ವಾಹನಗಳನ್ನು ನಿಲ್ಲಿಸಿಕೊಂಡು ವ್ಯಾಪಾರಮಾಡುತ್ತಿರುವುದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಯಾಗುತ್ತಿದೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟವರಿಗೆ ತಿಳಿಸಲಾಗುವುದು ಎಂದು ತಿಳಿಸಿದರು. | ವೃತ್ತ ಪರಿವೀಕ್ಷಕರು ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ |
| 11. | ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು ರವರು ಉಲ್ಲಾಸ್ ಚಿತ್ರಮಂದಿರ ರಸ್ತೆಯಲ್ಲಿ ವಾಹನಗಳನ್ನು ರಿಪೇರಿ ಮಾಡುತ್ತಿರುತ್ತಾರೆ ಆದ್ದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಯಾಗುತ್ತಿದೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟವರಿಗೆ ತಿಳಿಸಲಾಗುವುದು ಎಂದು ತಿಳಿಸಿದರು | ವೃತ್ತ ಪರಿವೀಕ್ಷಕರು ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ |
| 12. | ಕಾರ್ಯದರ್ಶಿಗಳು ಜನವರಿ ತಿಂಗಳಲ್ಲಿ ಶಂಕರನಗರದಲ್ಲಿ ಥಾಂಬರೀಕರಣ ಮಾಡಬೇಕಾಗಿರುವುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಹಾಗೂ ಬೆಸ್ಕಾಂ ಇಲಾಖೆಗೆ ಸಂಬಂಧಿಸಿದ ಕಾಮಗಾರಿಯನ್ನು ಪೂರ್ಣಗೊಳಿಸಲು ಕೋರಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಹಾಗೂ ಬೆಸ್ಕಾಂ ಇಲಾಖೆ |
| 13. | ಶ್ರೀ ಪುಟ್ಟಸ್ವಾಮಿ ಸದಸ್ಯರು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

ಕಾರ್ಯದರ್ಶಿಗಳು

1/1/2022

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44
ಮಾರಪ್ಪನಪಾಳ್ಯ

Scanned with CamScanner